ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ	1056
ಮಾನ್ಯ ಸದಸ್ಯರ ಹೆಸರು	ಶ್ರೀ ಬಿ.ಜಿ. ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ)
ಉತ್ತರಿಸಬೇಕಾದ ದಿನಾಂಕ	16/03/2020
ಉತ್ತರಿಸುವ ಸಚಿವರು	ಸನ್ಮಾನ್ಯ ವೈದ್ಯಕೀಯ ಶಿಕ್ಷಣ ಸಚಿವರು

ಕ್ರ. ಸಂ.	ಪ್ರಶ್ನೆಗಳು	ಉತ್ತರಗಳು
ಅ)	ಕಲಬುರಗಿಯ ಜಿಲ್ಲಾ ಆರೋಗ್ಯಾಧಿಕಾರಿಗಳ ಕಛೇರಿ ಆವರಣದಲ್ಲಿ ಶ್ರೀ ಜಯದೇವ ಹೃದ್ರೋಗ ವಿಜ್ಞಾನಗಳ ಸಂಸ್ಥೆಯ 300 ಹಾಸಿಗೆ ಸಾಮರ್ಥ್ಯದ ಪ್ರತ್ಯೇಕ ಆಸ್ಪತ್ರೆಯನ್ನು ನಿರ್ಮಿಸಲು ಕೆ.ಕೆ.ಆರ್.ಡಿ.ಬಿ. ಯಿಂದ ಇದುವರೆವಿಗೂ ಬಿಡುಗಡೆಯಾದ ಅನುದಾನ ಎಷ್ಟು; (ವಿವರ ನೀಡುವುದು)	ಕಲಬುರಗಿಯ ಜಿಲ್ಲಾ ಆರೋಗ್ಯಾಧಿಕಾರಿಗಳ ಕಛೇರಿ ಆವರಣದಲ್ಲಿ ಶ್ರೀ ಜಯದೇವ ಹೃದ್ರೋಗ ವಿಜ್ಞಾನ ಮತ್ತು ಸಂಶೋಧನಾ ಸಂಸ್ಥೆಯ 300 ಹಾಸಿಗೆ ಸಾಮರ್ಥ್ಯದ ಪ್ರತ್ಯೇಕ ಆಸ್ಪತ್ರೆಯನ್ನು ನಿರ್ಮಿಸಲು ಕೆ.ಕೆ.ಆರ್.ಡಿ.ಬಿ. ಯಿಂದ ಈವರೆವಿಗೂ ಒಟ್ಟು ರೂ.37.37 ಕೋಟಿ ಅನುದಾನ ಬಿಡುಗಡೆಯಾಗಿರುತ್ತದೆ.
ಆ)	ಶ್ರೀ. ಜಯದೇವ ಹೃದ್ರೋಗ ವಿಜ್ಞಾನಗಳ ಸಂಸ್ಥೆಯ ನಿರ್ಮಾಣದ ಪ್ರಸಕ್ತ ಕಾಮಗಾರಿಯ ಸಂಪೂರ್ಣ ವಿವರಗಳನ್ನು ನೀಡುವುದು?	ಶ್ರೀ. ಜಯದೇವ ಹೃದ್ರೋಗ ವಿಜ್ಞಾನಗಳ ಸಂಸ್ಥೆಯ ಕಲಬುರಗಿ ಜಿಲ್ಲಾ ಆರೋಗ್ಯಾಧಿಕಾರಿಗಳ ಕಛೇರಿಯ ಆವರಣದಲ್ಲಿ ಪ್ರಸಕ್ತ 300 ಹಾಸಿಗೆ ಸಾಮರ್ಥ್ಯದ ಪ್ರತ್ಯೇಕ ಆಸ್ಪತ್ರೆಯನ್ನು ನಿರ್ಮಿಸಲು ಆರ್ಕಿಟೆಕ್ಟ್ (Architect) ರವರನ್ನು ನೇಮಕಾತಿ ಮಾಡಲಾಗಿದೆ ಹಾಗೂ ಕಾಮಗಾರಿಯ ಉಸ್ತುವಾರಿಯನ್ನು ನೋಡಿಕೊಳ್ಳಲು Project Management Consultancy Services ಪ್ರಕ್ರಿಯೆಯು ಪೂರ್ಣಗೊಂಡಿರುತ್ತದೆ. ಕಾಮಗಾರಿ ಪ್ರಾರಂಭಿಸಲು ಅಧಿಸೂಚನೆ ಸಂಖ್ಯೆ: ಎಸ್‌ಜೆಐಸಿಆರ್/ಟಿ.ಎಸ್/ 54/2020-2021, ದಿನಾಂಕ: 07-02-2020ರನ್ವಯ ಟೆಂಡರ್ ಕರೆಯಲಾಗಿದ್ದು, ಸದ್ಯದಲ್ಲೇ ಆಸ್ಪತ್ರೆ ಕಾಮಗಾರಿ ಪ್ರಾರಂಭವಾಗಲಿದೆ.

ಕಡತ ಸಂ: ಎಂಇಡಿ 89 ಎಂಎಸ್ ಎಫ್ 2020

(ಡಾ: ಕೆ. ಸುಧಾಕರ್)
ವೈದ್ಯಕೀಯ ಶಿಕ್ಷಣ ಸಚಿವರು